ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014-15 : ದಿನಾಂಕ: 5-12-2014

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ 58ನೇ ಮಹಾಪರಿನಿರ್ವಾಣ ದಿನ:<br><br>ಡಾ. ಬಿ. ಆರ್. ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆ:<br><br>ಶ್ರೀ ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.<br><br>ಶ್ರೀ ಹೆಚ್. ಆಂಜನೇಯ, ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು | 06-12-2014<br>ಶನಿವಾರ<br>ಬೆಳಿಗ್ಗೆ 9-00 ಗಂಟೆಗೆ | ವಿಧಾನಸೌಧ ಮುಂಭಾಗ, ಬೆಂಗಳೂರು. |
| 2. | ದಕ್ಷಿಣ ಭಾರತ ವಿಜ್ಞಾನ ನಾಟಕೋತ್ಸವ ಸಮಾರೋಪ ಸಮಾರಂಭ:<br><br><u>ಮುಖ್ಯ ಅತಿಥಿಗಳು</u>:<br><br>ಶ್ರೀ ಅಭಿಷೇಕ್ ಮುಜುಂದಾರ್, ಬರಹಗಾರರು, ನಿರ್ದೇಶಕರು ಹಾಗೂ ನಟ.<br><br><u>ಅಧ್ಯಕ್ಷತೆ:</u><br><br>ಪ್ರೊ. ಸಿರಾಜ್ ಹಸನ್, ಪ್ರೊಫೆಸರ್. ಐ.ಐ.ಎ. | 06-12-2014<br>ಶನಿವಾರ<br>ಬೆಳಿಗ್ಗೆ 11-30 ಗಂಟೆಗೆ | ವಿಶ್ವೇಶ್ವರಯ್ಯ ಕೈಗಾರಿಕಾ ಮತ್ತು ತಾಂತ್ರಿಕ ವಸ್ತು ಸಂಗ್ರಹಾಲಯ, ಕಸ್ತೂರ ಬಾ ರಸ್ತೆ, ಬೆಂಗಳೂರು. |

| | | | |
|---|---|---|---|
| | ಬೆಂಗಳೂರು. | | |
| 3. | **ಕುವೆಂಪು ಚಿತ್ರ ಸಂಪುಟ ಲೋಕಾರ್ಪಣೆ ಸಮಾರಂಭ:**<br><br>**<u>ಲೋಕಾರ್ಪಣೆ:</u>**<br><br>ಶ್ರೀ ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.<br><br>**<u>ಮುಖ್ಯ ಅತಿಥಿಗಳು:</u>**<br><br>ಶ್ರೀ ಕಾಗೋಡು ತಿಮ್ಮಪ್ಪ, ವಿಧಾನಸಭಾಧ್ಯಕ್ಷರು,<br><br>ಶ್ರೀಮತಿ ಉಮಾಶ್ರೀ, ಕನ್ನಡ ಮತ್ತು ಸಂಸ್ಕೃತಿ ಸಚಿವರು<br><br>ಶ್ರೀ ಕಿಮ್ಮನೆ ರತ್ನಾಕರ, ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಖಾತೆ ಸಚಿವರು. | **06–12–2014**<br>ಶನಿವಾರ<br>ಮಧ್ಯಾಹ್ನ 3–00 ಗಂಟೆಗೆ | **ಕೊಠಡಿ ಸಂಖ್ಯೆ 334, ಮೂರನೇ ಮಹಡಿ, ವಿಧಾನಸೌಧ ಸಮ್ಮೇಳನ ಸಭಾಂಗಣ, ಬೆಂಗಳೂರು.** |
| 4. | **Launch of Report : Green Growth Strategy for Karnataka.**<br><br>**<u>Release of the Report:</u>**<br><br>Shri Siddaramaiah, Chief Minister of Karnataka,<br><br>**<u>Chief Guests:</u>**<br><br>Shri D.H. Shankarmurthy, Chairman, Karnataka Legislative Council preside<br><br>Shri D.K. Shivakumar, | **06–12–2014**<br>**Saturday 5-00 PM** | **Room No 334. Conference Hall, 3rd Floor, Vidhana Soudha, Bangalore** |

| | | | |
|---|---|---|---|
| | Minister for Energy<br>Shri M.B. Patil, Minister for Water Resources<br>Prof. B. K. Chandrashekhar, Former Minister | | |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

## ಲೈಂಗಿಕ ದೌರ್ಜನ್ಯದ ವಿರುದ್ಧ ಜಾಗೃತಿ ಮೂಡಿಸುವ ಕಿರುಚಿತ್ರ "ನಿರ್ಭಯ" ಬಿಡುಗಡೆ

ಬೆಂಗಳೂರು, ಡಿಸೆಂಬರ್ 5 (ಕರ್ನಾಟಕ ವಾರ್ತೆ)

ಮಹಿಳೆಯರು ಮತ್ತು ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯದ ವಿರುದ್ಧ ಜಾಗೃತಿ ಮೂಡಿಸುವ ಕಿರುಚಿತ್ರ "ನಿರ್ಭಯ" ವನ್ನು ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ಶ್ರೀ ಹೆಚ್.ಡಿ. ಗಂಗರಾಜು ಅವರು ರಾಜ್ಯ ಸರ್ಕಾರಕ್ಕೆ ಹಸ್ತಾಂತರಿಸಿದರು.

ಸರ್ಕಾರದ ಪರವಾಗಿ ಇದನ್ನು ಸ್ವೀಕರಿಸಿದ ನಂತರ ಗೃಹ ಸಚಿವ ಶ್ರೀ ಕೆ. ಜೆ. ಜಾರ್ಜ್ ಅವರು ಮಾತನಾಡಿ ಈ ಕಿರುಚಿತ್ರ ಅತ್ಯುತ್ತಮವಾಗಿ ಮೂಡಿ ಬಂದಿದೆ. ಖ್ಯಾತ ನಟ ನಟಿಯರು ಈ ಚಿತ್ರದಲ್ಲಿ ಸಾರ್ವಜನಿಕರಿಗೆ ಸಂದೇಶ ನೀಡಿದ್ದಾರೆ. ಸಮಾಜದಲ್ಲಿ ಅಪರಾಧಿಗಳು ವಿಕೃತ ಕಾಮಿಗಳು, ಮೃಗೀಯ ಮನಸ್ಸುಳ್ಳವರು, ತಲೆಯೆತ್ತಿ ನಡೆಯದಂತಹ ವಾತಾವರಣವನ್ನು ಸೃಷ್ಟಿಸಬೇಕು. ಅಪರಾಧವಾಗದಂತೆ ತಡೆಯಬೇಕು ಇದು ಎಲ್ಲರ ಕರ್ತವ್ಯ. ಈ ಕಿರುಚಿತ್ರವನ್ನು ಎಲ್ಲ ಚಿತ್ರಮಂದಿರಗಳಲ್ಲಿ ಪ್ರದರ್ಶಿಸುವ ನಿಟ್ಟಿನಲ್ಲಿ ವಾರ್ತಾ ಸಚಿವರು ಕ್ರಮ ಕೈಗೊಳ್ಳುವರು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವ ಶ್ರೀ ಆರ್. ರೋಷನ್‌ಬೇಗ್, ಕರ್ನಾಟಕ ಚಲನಚಿತ್ರ ಅಕಾಡೆಮಿ ಅಧ್ಯಕ್ಷ ಶ್ರೀ ಎಸ್. ವಿ. ರಾಜೇಂದ್ರಸಿಂಗ್ ಬಾಬು, ಗೃಹ ಸಚಿವರ ಸಲಹೆಗಾರ ಶ್ರೀ ಕೆಂಪಯ್ಯ, ಪೋಲೀಸ್ ಜಂಟಿ ಆಯುಕ್ತ ಶ್ರೀ ಅಲೋಕ್‌ಕುಮಾರ್ ಈ ಚಿತ್ರದ ನಿರ್ದೇಶಕ ಶ್ರೀ ದೊರೆ ಭಗವಾನ್. ವಾಣಿಜ್ಯ ಮಂಡಳಿ ಪದಾಧಿಕಾರಿಗಳು, ವಾರ್ತಾ ಇಲಾಖೆ ನಿರ್ದೇಶಕ ಶ್ರೀ ಎನ್. ಆರ್. ವಿಶುಕುಮಾರ್ ಅವರು ಉಪಸ್ಥಿತರಿದ್ದರು.

ಈ ಚಿತ್ರದಲ್ಲಿ ಖ್ಯಾತ ತಾರೆಯರಾದ ಶಿವರಾಜ್‌ಕುಮಾರ್, ಪುನೀತ್ ರಾಜ್‌ಕುಮಾರ್, ಉಪೇಂದ್ರ, ಯಶ್, ಗಣೇಶ್, ಸಾಧು ಕೋಕಿಲ, ರಾಧಿಕಾ ಪಂಡಿತ್, ರಾಗಿಣಿ ದ್ವಿವೇದಿ, ಭವ್ಯ, ಅಮೂಲ್ಯ, ಪೂಜಾ ಗಾಂಧಿ, ಮತ್ತಿತರರು ಈ ಕಿರುಚಿತ್ರದಲ್ಲಿ ಭಾಗವಹಿಸಿ ಜಾಗೃತಿಯ ಸಂದೇಶ ನೀಡಿದ್ದಾರೆ. ಮುಂದಿನ ದಿನಗಳಲ್ಲಿ ಗೃಹ

ಇಲಾಖೆ ಕೈಗೊಂಡಿರುವ ಕ್ರಮಗಳ ಮಾಹಿತಿಯೊಂದಿಗೆ ವಾಣಿಜ್ಯ ಮಂಡಳಿಯ ವತಿಯಿಮದ ಪ್ರತ್ಯೇಕ ಚಿತ್ರ ನಿರ್ಮಿಸಲಾಗುವುದು ಎಂದು ವಾಣಿಜ್ಯ ಮಂಡಳಿ ಅಧ್ಯಕ್ಷರು ಪ್ರಕಟಿಸಿದರು.

**ಚಿತ್ರ ಶೀರ್ಷಿಕೆ :**

ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಯ ವತಿಯಿಂದ ನಿರ್ಮಿಸಲಾದ ಮಹಿಳೆಯರು ಮತ್ತು ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯದ ವಿರುದ್ಧ ಜಾಗೃತಿ ಮೂಡಿಸುವ ಕಿರುಚಿತ್ರ "ನಿರ್ಭಯ" ವನ್ನು ವಾಣಿಜ್ಯ ಮಂಡಳಿ ಅಧ್ಯಕ್ಷ ಶ್ರೀ ಗಂಗರಾಜ್ ಅವರು ಗೃಹ ಸಚಿವ ಶ್ರೀ ಕೆ.ಜೆ. ಜಾರ್ಜ್ ಹಾಗೂ ಮೂಲ ಸೌಕರ್ಯ ಅಭಿವೃದ್ಧಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವ ಶ್ರೀ ಆರ್. ರೋಷನ್ ಬೇಗ್ ಅವರಿಗೆ ಶುಕ್ರವಾರ ಹಸ್ತಾಂತರಿಸಿದರು. ಕರ್ನಾಟಕ ಚಲನಚಿತ್ರ ಅಕಾಡೆಮಿ ಅಧ್ಯಕ್ಷ ಶ್ರೀ ಎಸ್.ವಿ. ರಾಜೇಂದ್ರಸಿಂಗ್ ಬಾಬು, ಚಿತ್ರದ ನಿರ್ದೇಶಕ ಶ್ರೀ ದೊರೆ-ಭಗವಾನ್ ಅವರು ಹಾಜರಿದ್ದರು.

## ಕುವೆಂಪು ಚಿತ್ರ ಸಂಪುಟ ಲೋಕಾರ್ಪಣೆ

**ಬೆಂಗಳೂರು, ಡಿಸೆಂಬರ್ 5 (ಕರ್ನಾಟಕ ವಾರ್ತೆ)**

ಕುಪ್ಪಳಿಯ ರಾಷ್ಟ್ರಕವಿ ಕುವೆಂಪು ಪ್ರತಿಷ್ಠಾನದ ವತಿಯಿಂದ ಡಿಸೆಂಬರ್ 6 ರಂದು ಶನಿವಾರ ಮಧ್ಯಾಹ್ನ 3 ಗಂಟೆಗೆ ಬೆಂಗಳೂರಿನ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ " ಕುವೆಂಪು ಚಿತ್ರ ಸಂಪುಟ ಲೋಕಾರ್ಪಣೆ" ಸಮಾರಂಭವನ್ನು ಏರ್ಪಡಿಸಲಾಗಿದೆ. ರಾಜ್ಯದ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಚಿತ್ರ ಸಂಪುಟ ಲೋಕಾರ್ಪಣೆ ಮಾಡುವರು.

ಮುಖ್ಯ ಅತಿಥಿಗಳಾಗಿ ವಿಧಾನಸಭಾಧ್ಯಕ್ಷ ಶ್ರೀ ಕಾಗೋಡು ತಿಮಪ್ಪ, ಕನ್ನಡ ಮತ್ತು ಸಂಸ್ಕೃತಿ ಖಾತೆ ಸಚಿವೆ ಶ್ರೀಮತಿ ಉಮಾಶ್ರೀ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಖಾತೆ ಸಚಿವ ಶ್ರೀ ಕಿಮ್ಮನೆ ರತ್ನಾಕರ ಪಾಲ್ಗೊಳ್ಳುವರು. ಚಿತ್ರ ಸಂಪುಟ ಕುರಿತು ಸಾಹಿತಿ ಶ್ರೀ ನಾಗತಿಹಳ್ಳಿ ಚಂದ್ರಶೇಖರ್ ಅವರು ಮಾತನಾಡುವರು. ಪ್ರತಿಷ್ಠಾನದ ಅಧ್ಯಕ್ಷ ನಾಡೋಜ ಪ್ರೊ. ಹಂ.ಪ. ನಾಗರಾಜಯ್ಯ ಅವರು ಸಮಾರಂಭದ ಅಧ್ಯಕ್ಷತೆ ವಹಿಸುವರು.

**ವಿಶೇಷ ಮಾರಾಟ ವ್ಯವಸ್ಥೆ:**

ಡಿಸೆಂಬರ್ 6 ರಿಂದ 8 ರವರೆಗೆ ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದ ಆವರಣ ಮತ್ತು ನಗರದ ವಿವಿಧ ಸ್ಥಳಗಳಲ್ಲಿ ವಿಶೇಷ ಮಾರಾಟದ ವ್ಯವಸ್ಥೆ ಮಾಡಲಾಗಿದೆ. ಹೆಚ್ಚಿನ ವಿವರಗಳಿಗೆ ಮೊಬೈಲ್ ಸಂಖ್ಯೆ 9481409293, 9481064742 ಅನ್ನು ಸಂಪರ್ಕಿಸಬಹುದಾಗಿದೆ.

ಸಮ:ಬಾಬು:ಜಿಪಿಆರ್.

## "ಪುಸ್ತಕ ಪ್ರೇಮಿ ವಿದ್ಯಾರ್ಥಿ ಬಳಗ" ಕ್ಕೆ ಅರ್ಜಿ ಆಹ್ವಾನ

**ಬೆಂಗಳೂರು, ಡಿಸೆಂಬರ್ 4 (ಕರ್ನಾಟಕ ವಾರ್ತೆ)**

ಕನ್ನಡ ಪುಸ್ತಕ ಪ್ರಾದಿಕಾರವು ವಿದ್ಯಾರ್ಥಿ ಯುವಜನರನ್ನು ಸಾಹಿತ್ಯಾಭಿರುಚಿಗೆ ಆಕರ್ಷಿಸಲು ಹಾಗೂ ಸಾಂಸ್ಕೃತಿಕ ಕ್ರಿಯಾಶೀಲತೆಯನ್ನು ಬೆಳೆಸಲು ಪದವಿ ಕಾಲೇಜು ಹಾಗೂ ಸ್ನಾತಕೋತ್ತರ ಕೇಂದ್ರಗಳಲ್ಲಿ 'ಪುಸ್ತಕ ಪ್ರೇಮಿ ವಿದ್ಯಾರ್ಥಿ ಬಳಗ' ವನ್ನು ರಚಿಸಲು ಅರ್ಜಿಗಳನ್ನು ಆಹ್ವಾನಿಸಿದೆ.

ಕನಿಷ್ಠ 5 ರಿಂದ 15 ಮಂದಿ ವಿದ್ಯಾರ್ಥಿಗಳನ್ನೊಳಗೊಂಡಂತೆ ಕಾರ್ಯಕಾರಿ ಸಮಿತಿಯೊಂದನ್ನು ರಚಿಸಿಕೊಂಡು, ಆಯಾ ಕಾಲೇಜುಗಳ ಪ್ರಾಂಶುಪಾಲರು ಹಾಗೂ ಕನ್ನಡ ವಿಭಾಗಗಳ ಮುಖ್ಯಸ್ಥರ ಅನುಮೋದನೆಯೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಕಾಲೇಜಿನಲ್ಲಿ ಸಾಂಸ್ಕೃತಿಕ ವಾತಾವರಣವನ್ನು ಕ್ರಿಯಾಶೀಲವಾಗಿಡುವ ನಿಟ್ಟಿನಲ್ಲಿ ತಿಂಗಳಿಗೆ ಒಂದರಂತೆ ಸಾಹಿತ್ಯಕ ಹಾಗೂ ಸಾಂಸ್ಕೃತಿಕ ಚಟುವಟಿಕೆಯನ್ನು ಈ ಬಳಗವು ಹಮ್ಮಿಕೊಳ್ಳುತ್ತದೆ. ಇದಕ್ಕಾಗಿ ಪ್ರಾಧಿಕಾರದಿಂದ ಕಾರ್ಯಕ್ರಮ ಒಂದಕ್ಕೆ ರೂ 5,000/- ಗರಿಷ್ಠ ಮಿತಿಯೊಳಗೆ ವಾಸ್ತವಿಕ ವೆಚ್ಚವನ್ನು ಭರಿಸಲಾಗುವುದು. ಇದಲ್ಲದೆ ಪ್ರಾಧಿಕಾರವು ಹಮ್ಮಿಕೊಳ್ಳುವ ಎಲ್ಲಾ ಯೋಜನೆ ಹಾಗೂ ಕಾರ್ಯಕ್ರಮಗಳಲ್ಲಿ ಈ 'ಪುಸ್ತಕ ಪ್ರೇಮಿ ವಿದ್ಯಾರ್ಥಿ ಬಳಗ' ವನ್ನು ತೊಡಗಿಸಿಕೊಳ್ಳಲಾಗುವುದು. ಅರ್ಜಿ ಸಲ್ಲಿಸಲು ಕಡೆಯ ದಿನಾಂಕ 31.12.2014.

ನಿಗದಿತ ಅರ್ಜಿ ನಮೂನೆಗಾಗಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ಜಿಲ್ಲಾ ಸಹಾಯಕ ನಿರ್ದೇಶಕರ ಕಚೇರಿಯನ್ನು ಅಥವಾ ಕನ್ನಡ ಪುಸ್ತಕ ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಅಂದರೆ www.kannadapusthakapradhikara.com ಅನ್ನು ಸಂಪರ್ಕಿಸಬಹುದಾಗಿದೆ. ಅರ್ಜಿಗಳನ್ನು ದಿನಾಂಕ: 30-12-2014 ರೊಳಗೆ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು – 560 002 – ಅವರಿಗೆ ಕಳುಹಿಸಿಕೊಡಲು ಕೋರಿದೆ.

ಸಮ:ಬಾಬು:ಜಿಪಿಆರ್;

## ಸಿವಿಲ್ ಪೊಲೀಸ್ ಕಾನ್ಸ್‌ಟೇಬಲ್ ನೇಮಕಾತಿ : ಮರು ಪರೀಕ್ಷೆ ನಡೆಸಲು ತೀರ್ಮಾನ

**ಬೆಂಗಳೂರು, ಡಿಸೆಂಬರ್ 5 (ಕರ್ನಾಟಕ ವಾರ್ತೆ)**

ಸರ್ಕಾರದ ಹಾಗೂ ಇಲಾಖೆಯ ಘನತೆಯನ್ನು ಎತ್ತಿ ಹಿಡಿಯಲು ಸಾರ್ವಜನಿಕರ ಹಿತದೃಷ್ಟಿಯಿಂದ ಹಾಗೂ ಅಭ್ಯರ್ಥಿಗಳ ಮನಸ್ಸಿನಲ್ಲಿರುವ ಸಂಶಯ ಹಾಗೂ ಶಂಕೆಯನ್ನು ತೆಗೆದುಹಾಕಲು ನವೆಂಬರ್ 16 ರಂದು ನಡೆದ ಲಿಖಿತ ಪರೀಕ್ಷೆಯನ್ನು ಅಕೃತ ಹಾಗೂ ಶೂನ್ಯವೆಂಬು ಪರಿಗಣಿಸಲಾಗಿದೆ. ಮರು ಪರೀಕ್ಷೆ ನಡೆಸಲು ನಿರ್ಧರಿಸಲಾಗಿದೆ ಹಾಗೂ ಮರು ಪರೀಕ್ಷೆ ದಿನಾಂಕವನ್ನು ಮಾಧ್ಯಮಗಳ ಮೂಲಕ ಹಾಗೂ ಪೊಲೀಸ್ ವೆಬ್‌ಸೈಟ್‌ನಲ್ಲಿ ತಿಳಿಸಲಾಗುವುದು ಎಂದು ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ (ನೇಮಕಾತಿ ಮತ್ತು ತರಬೇತಿ) ಶ್ರೀ ಎನ್.ಎಸ್. ಮೇಘರಿಕ್ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಿವಿಲ್ ಪೊಲೀಸ್ ಕಾನ್ಸ್‌ಟೇಬಲ್ (ಪುರುಷ ಮತ್ತು ಮಹಿಳೆ) ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ, ಲಿಖಿತ ಪರೀಕ್ಷೆಯನ್ನು ನವೆಂಬರ್ 16 ರಂದು ನಡೆಸಲಾಗಿತ್ತು. ಅದೇ ದಿನ ಅಂದರೆ ದಿನಾಂಕ ನವೆಂಬರ್ 16 ರಂದು ಪರೀಕ್ಷೆಗೆ ಮುಂಚೆ ಕಲ್ಬುರ್ಗಿ ವಿಶ್ವವಿದ್ಯಾಲಯದ ಸಿಬ್ಬಂದಿಗಳಿಗೆ ಬಂದ ಖಚಿತ ಮಾಹಿತಿಯ ಮೇರೆಗೆ ಇಬ್ಬರನ್ನು ವಶಕ್ಕೆ ಪಡೆಯಲಾಗಿ, ಅವರಿಂದ ಕೈಯಲ್ಲಿ ಬರೆದಿರುವ ಲಿಖಿತ

ಪರೀಕ್ಷೆಯ ಉತ್ತರಗಳನ್ನು ವಶಪಡಿಸಿಕೊಳ್ಳಲಾಗಿರುತ್ತದೆ. ಇದರಿಂದಾಗಿ ಪರೀಕ್ಷೆಗೆ ಮುಂಚಿತವಾಗಿ ಉತ್ತರಗಳು ಬಯಲಾಗಿರುವುದು ಕಂಡು ಬಂದಿರುತ್ತದೆ. ಸಂಪೂರ್ಣ ವಿಚಾರಣೆಯ ನಂತರ ಕಲ್ಬುರ್ಗಿ ವಿಶ್ವವಿದ್ಯಾಲಯದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡು, 14 ಜನ ಆರೋಪಿತರನ್ನು ದಸ್ತಗಿರಿ ಮಾಡಿ ಒಟ್ಟು ರೂ 77,03,506 ವಶಪಡಿಸಿಕೊಂಡಿದ್ದು, ಹೆಚ್ಚಿನ ತನಿಖೆ ನಡೆಯುತ್ತಿದೆ.

ನವೆಂಬರ್ 16 ರ 2014 ರಂದು ನಡೆದ ಪರೀಕ್ಷೆಯಲ್ಲಿ ಅಕ್ರಮವೆಸಗಿರುವ ಅಭ್ಯರ್ಥಿಗಳ ಅಭ್ಯರ್ಥಿತವನ್ನು ಚಾಲ್ತಿಯಲ್ಲಿರುವ ನಿಯಮಗಳಂತೆ ಅನರ್ಹಗೊಳಿಸಲಾಗುವುದು ಎಂದು ಅವರು ತಿಳಿಸಿದ್ದಾರೆ.

ಸಮ:ಬಾಬು:ಜಿಪಿಆರ್.

## ಹುತ್ತರಿ ಹಬ್ಬ –ಡಿಸೆಂಬರ್ 6 ರಂದು ಕೊಡಗಿನಲ್ಲಿ ಸಾರ್ವತ್ರಿಕ ರಜೆ

ಬೆಂಗಳೂರು, ಡಿ. 5 (ಕರ್ನಾಟಕ ವಾರ್ತೆ)–

**ಈ ಹಿಂದೆ ರಾಜ್ಯ ಸರ್ಕಾರವು 2014 ರ ಸಾರ್ವತ್ರಿಕ ರಜಾ ದಿನಗಳ ಪಟ್ಟಿಯಲ್ಲಿ ಹುತ್ತರಿ ಹಬ್ಬದ ಪ್ರಯುಕ್ತ ಕೊಡಗು ಜಿಲ್ಲೆಗೆ ಮಾತ್ರ ಮಂಜೂರು ಮಾಡಿರುವ ಸಾರ್ವತ್ರಿಕ ರಜೆಯ ದಿನಾಂಕವನ್ನು ಡಿಸೆಂಬರ್ 7 ರಿಂದ ಬದಲಾಯಿಸಿ ಡಿಸೆಂಬರ್ 6 ರಂದು ಸಾರ್ವತ್ರಿಕೆ ರಜೆ ಘೋಷಿಸಲಾಗಿದೆ.**

**ಹುತ್ತರಿ ಹಬ್ಬದ ಪ್ರಯುಕ್ತ ರಾಜ್ಯದ ಉಳಿದ ಭಾಗಗಳಲ್ಲಿ ಡಿಸೆಂಬರ್ 7 ರಂದು ಮಂಜೂರು ಮಾಡಿರುವ ಪರಿಮಿತ ರಜೆಯನ್ನು ಬದಲಾಯಿಸಿ ಡಿಸೆಂಬರ್ 6 ರಂದು ಪರಿಮಿತ ಘೋಷಿಸಿ ಆದೇಶ ಹೊರಡಿಸಲಾಗಿದೆ.**

**ಸಮ/ಕೆಎಂ**